ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು) :

ಅ) ಹೌದು.

ಆ) ಮುದ್ದೇಬಿಹಾಳ ಪಟ್ಟಣದ ರಿ.ಸ.ನಂ.85/2ರಲ್ಲಿನ 8 ಎಕರೆ 19 ಗುಂಟೆ ಜಮೀನನ್ನು ಮಿನಿ ವಿಧಾನಸೌಧ ನಿರ್ಮಾಣಕ್ಕಾಗಿ ಕಾಯ್ದಿರಿಸಲಾಗಿದೆ.

ಇ) ಅಗತ್ಯವಿರುವ ಸಂಪನ್ಮೂಲಗಳು ವ್ಯವಸ್ಥೆಯಾದ ಕೂಡಲೇ ಮಿನಿ ವಿಧಾನಸೌಧ ನಿರ್ಮಾಣದ ಕಾರ್ಯವನ್ನು ಕೈಗೊಳ್ಳಲಾಗುವುದು.

612 (1067) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಾದ್ಯಂತ ಕಾರ್ಯನಿರ್ವಹಿಸುತ್ತಿರುವ ಅಸಿಸ್ಟೆಂಟ್ ಕಮೀಷನರ್ ಹಾಗೂ ತಹಶೀಲ್ದಾರರುಗಳ ವರ್ಗಾವಣೆಯಲ್ಲಿ ಎಷ್ಟು ಜನರನ್ನು ಅವಧಿಪೂರ್ವ ವರ್ಗಾಯಿಸಲಾಗಿದೆ?

ಆ) ಈ ರೀತಿ ವರ್ಗಾವಣೆ ಮಾಡಲು ಕಾರಣವೇನು?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು) :

ಅ) ಒಟ್ಟಾರೆ 34 ಅಸಿಸ್ಟೆಂಟ್ ಕಮೀಷನರ್‌ಗಳನ್ನು ಮತ್ತು 114 ತಹಶೀಲ್ದಾರರುಗಳನ್ನು ಅವಧಿಪೂರ್ವ ವರ್ಗಾವಣೆ ಮಾಡಲಾಗಿದೆ.

ಆ) ಸಾರ್ವಜನಿಕ ಹಿತದೃಷ್ಟಿಯಿಂದ ಮತ್ತು ಆಡಳಿತಾತ್ಮಕ ಕಾರಣಗಳಿಂದ ವರ್ಗಾವಣೆ ಮಾಡಲಾಗಿದೆ.

614 (813) ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರೈತರು ಮಾಡಿರುವ ಬಗರ್ ಹುಕುಂ ಸಾಗುವಳಿ ಸಕ್ರಮೀಕರಣಕ್ಕೆ ತಾಲ್ಲೂಕು ಮಟ್ಟದ ಸಮಿತಿಗಳನ್ನು ಇದುವರೆಗೂ ರಚಿಸದಿರಲು ಕಾರಣವೇನು;

ಆ) ತಕ್ಷಣವೇ ಈ ಸಮಿತಿಗಳನ್ನು ರಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಹಾಗಿದ್ದಲ್ಲಿ, ಯಾವಾಗ ಈ ಸಮಿತಿಗಳನ್ನು ರಚಿಸಲಾಗುವುದು?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು) :

ಅ) ಹೊಸ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಹಿಂದಿನ ಬಗರ್ ಹುಕುಂ ಸಮಿತಿಗಳನ್ನು ರದ್ದುಪಡಿಸಿ ಹೊಸ ಸಮಿತಿಗಳನ್ನು ರಚಿಸಲು ಕ್ರಮ ಕೈಗೊಂಡಿರುತ್ತದೆ.

ಆ) ಸಮಿತಿಗಳನ್ನು ರಚಿಸಲು ಕ್ರಮ ಕೈಗೊಳ್ಳಲಾಗುತ್ತಿದ್ದು, ಈಗಾಗಲೇ 22 ತಾಲ್ಲೂಕುಗಳಲ್ಲಿ ಹೊಸ ಸಮಿತಿಗಳನ್ನು ರಚಿಸಿ ಆದೇಶ ಹೊರಡಿಸಲಾಗಿದೆ.

ಇ) ಉಳಿದ ತಾಲ್ಲೂಕುಗಳ ಸಮಿತಿಗಳನ್ನು ರಚಿಸಲು ಪರಿಶೀಲನೆಯಲ್ಲಿದ್ದು, ಸದ್ಯದಲ್ಲಿಯೇ ಆದೇಶ ಹೊರಡಿಸಲಾಗುತ್ತದೆ.